MVC No. 637/2023 - -

PW – 2

ದಿನಾಂಕಃ 05.08.2026 ರಂದು ಸಾಕ್ಷಿಗೆ ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ ಅರ್ಜಿದಾರರ ಪರ ವಕೀಲರಿಂದ –

ನಾನು ನನ್ನ ಮುಖ್ಯ ವಿಚಾರಣೆಯಾಗಿ ಶಪಥ ಪತ್ರವನ್ನು ಹಾಜರುಪಡಿಸಿರುತ್ತೇನೆ. ಶಪಥ ಪತ್ರದಲ್ಲಿ ಬರೆದಿರುವುದನ್ನು ನಾನು ಹೇಳಿ ಬರೆಯಿಸಿದ್ದು, ಬರೆದ ನಂತರ ಅದನ್ನು ನನಗೆ ಓದಿ ಹೇಳಿದ್ದು ನಂತರ ಸಹಿ ಮಾಡಿರುತ್ತೇನೆ. ನನ್ನ ಶಪಥ ಪತ್ರದಲ್ಲಿ ಬರೆದಿರುವುದು ಎಲ್ಲಾ ಸತ್ಯವಾಗಿರುತ್ತದೆ.

ನಿಪಿ–2 ರಲ್ಲಿ ಸಾಕ್ಷಿಯ ಸಹಿಯನ್ನು ನಿಪಿ–2 ಎ ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಎದುರುದಾರರ ಪರ ವಕೀಲರಿಂದ –

ಅರ್ಜಿದಾರ ನನ್ನ ಬಳಿ ಎಂದಿಗೂ ಚಿಕಿತ್ಸೆ ಪಡೆದಿಲ್ಲ ಹಾಗೂ ನಾನು ಶಸ್ತ್ರ ಚಿಕಿತ್ಸೆ ಮಾಡಿಲ್ಲ ಎಂದರೆ ಸರಿ. ನಾನು ಕೇವಲ ಅಂಗನ್ಯೂನತೆ ಪ್ರಮಾಣ ಪತ್ರ ನೀಡಿದ್ದೇನೆ ಎಂದರೆ ಸಾಕ್ಷಿಯು ಪಾಲೋ ಅಪ್ ಚಿಕಿತ್ಸೆ ಮುಖಾಂತರ ನೀಡಿದ್ದೇನೆ ಎಂದು ನುಡಿಯುತ್ತಾರೆ. ಅರ್ಜಿದಾರರು ನನ್ನ ಬಳಿ ಪಾಲೋ ಅಪ್ ಚಿಕಿತ್ಸೆಗೆ ತಾಃ 26.04.2025 ನಂತರ ಬಂದಿದ್ದಾರೆ ಎಂದರೆ ಸರಿ. ಅರ್ಜಿದಾರರು ನನ್ನ ಬಳಿ ಬರುವ ಪೂರ್ವದಲ್ಲಿ ಕೆ ಎಂ ಸಿ ಮಣಿಪಾಲದಲ್ಲಿ ಚಿಕಿತ್ಸೆ ಪಡೆದಿದ್ದಾರೆ ಎಂದರೆ ಸರಿ. ಅರ್ಜಿದಾರರು ಕೆ ಎಂ ಸಿ ಮಣಿಪಾಲದಲ್ಲಿ ಚಿಕಿತ್ಸೆ ಪಡೆದಿರುವ ಕಾರಣ ಅಲ್ಲಿಯ ವೈದ್ಯರು ಅಂಗನ್ಯೂನತೆ ಪ್ರಮಾಣ ಪತ್ರ ನೀಡಲು ಸಾಧ್ಯ ಎಂದರೆ ಸರಿ. ನಾನು ಕೆ ಎಂ ಸಿ ವೈದ್ಯರ ಬಳಿ ಅರ್ಜಿದಾರರ ಚಿಕಿತ್ಸೆಗೆ ಸಂಬದಪಟ್ಟಂತೆ ಯಾವುದೇ ಮಾಹಿತಿ ಪಡೆದಿಲ್ಲ ಆದರೆ ದಾಖಲೆಗಳನ್ನು ಪರಿಶೀಲಿಸಿದ್ದೇನೆ. ಅರ್ಜಿದಾರರ ಬಲಗೈ ಭುಜಕ್ಕೆ ಸಂಬಂದಪಟ್ಟಂತೆ ನಾನು ಅಂಗನ್ಯೂನತೆ ಪ್ರಮಾಣ ಪತ್ರ ನೀಡಿದ್ದೇನೆ ಎಂದರೆ ಸರಿ. ಕೆ ಎಂ ಸಿ ಆಸ್ಪತ್ರೆಯ ಚಿಕಿತ್ಸೆಗೆ ಅರ್ಜಿದಾರರು ಸಂಪೂರ್ಣ ಸ್ಪಂದಿಸಿದ್ದಾರೆ ಎಂದರೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ಸದರಿ ಅಂಗನ್ಯೂನತೆಯನ್ನು ಪೂರ್ಣ ದೇಹಕ್ಕೆ ಹೋಲಿಸಿದರೆ ಅಂಗನ್ಯೂನತೆ ಕಡಿಮೆಯಾಗಬಹುದು ಎಂದರೆ ಸರಿ. ಅಂಗನ್ಯೂನತೆ ಪ್ರಮಾಣ ಪತ್ರ ಪಡೆದ ನಂತರ ಅರ್ಜಿದಾರರು ನನ್ನ ಬಳಿ ಚಿಕಿತ್ಸೆಗೆ ಬಂದಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಪರೀಕ್ಷೆ ಮಾಡದೇ ಅರ್ಜಿದಾರರಿಗೆ ಸಹಾಯ ಮಾಡುವ ಉದ್ದೇಶದಿಂದ ನಿಪಿ–2 ದಾಖಲೆಯನ್ನು ಸುಳ್ಳಾಗಿ ನೀಡಿದ್ದೇನೆ ಎಂದರೆ ಸರಿಯಲ್ಲ. ನಾನು ಸುಳ್ಳು ಪ್ರಮಾಣ ಪತ್ರ ಹಾಗೂ ಸುಳ್ಳು ದಾಖಲಾತಿ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. 3 ನೇ ಎದುರುದಾರರು ಪರಿಹಾರ ಕೊಡಲು ಬಾದ್ಯರಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ಬಹಿರಂಗ ನ್ಯಾಯಾಲಯದಲ್ಲಿ ನನ್ನ ಹೇಳಿಕೆ ಮೇರೆಗೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ.ಸ.ಸ.ಇದೆ.

ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿಜೆಎಂ
ನ್ಯಾಯಾಲಯ, ದಾವಣಗೆರೆ